# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಮುಖ್ಯ ಆಯುಕ್ತರು ರವರ ಕಛೇರಿ, ನರಸಿಂಹರಾಜ ಚೌಕ, ಬೆಂಗಳೂರು-560 002**

---

**ದಿನಾಂಕ: 24-03-2024**

## -: ಪತ್ರಿಕಾ ಪ್ರಕಟಣೆ :-

### ಬಿಬಿಎಂಪಿ ವ್ಯಾಪ್ತಿಯಲ್ಲಿ 1 ನೇ ಏಪ್ರಿಲ್ 2024ರಿಂದ ಆಸ್ತಿ ತೆರಿಗೆ ಹೆಚ್ಚಳವಾಗಲಿದೆ ಎಂಬ ಸುಳ್ಳು ಸುದ್ದಿಯ ವೀಡಿಯೋ ಕುರಿತು ಸ್ಪಷ್ಟೀಕರಣ:

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 1ನೇ ಏಪ್ರಿಲ್ 2024ರಿಂದ ಆಸ್ತಿ ತೆರಿಗೆಯನ್ನು ಹೆಚ್ಚಳ ಮಾಡಲಾಗುತ್ತಿದೆ ಎಂದು ಕೆಲವು ಸುಳ್ಳು ಸುದ್ದಿಯ ವಿಡಿಯೋಗಳು ಹರಿದಾಡುತ್ತಿದ್ದು, ಪಾಲಿಕೆ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆಯಲ್ಲಿ ಯಾವುದೇ ಹೆಚ್ಚಳ ಮಾಡುತ್ತಿಲ್ಲ ಎಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ.

Index.daily ಎಂಬ ಇನ್ಸ್ ಸ್ಟಾಗ್ರಾಮ್ ಪೇಜ್ (https://www.instagram.com/reel/C4c-4klyOlJ/?igsh=ajc0dHVwdjJ3YTBr) ನಲ್ಲಿ ಅನುರಾಗ್ ಸಿಂಗ್ ಎಂಬುವವರು 13ನೇ ಮಾರ್ಚ್ 2024ರಂದು ಕರ್ನಾಟಕದಲ್ಲಿ ಬಾರೀ ತೆರಿಗೆ ಹೆಚ್ಚಳವಾಗಲಿದೆ ಎಂಬ ವೀಡಿಯೋ ಒಂದನ್ನು ಹರಿದುಬಿಟ್ಟಿದ್ದಾರೆ.

ಸದರಿ ವಿಡಿಯೋದಲ್ಲಿ ಬೆಂಗಳೂರು ಮಹಾನಗರ ಪಾಲಿಕೆಯು ಬಾಡಿಗೆ ಮನೆಗಳ ಮೇಲಿನ ಆಸ್ತಿ ತೆರಿಗೆಯನ್ನು 2 ಪಟ್ಟು ಮತ್ತು ವಾಣಿಜ್ಯ ಸಂಸ್ಥೆಗಳಿಗೆ 3-5 ಪಟ್ಟು ಹೆಚ್ಚಿಸುವುದು ಸೇರಿದಂತೆ ಇನ್ನಿತರೆ ವಿಷಗಳ ಕುರಿತು ಮಾತನಾಡಿರುತ್ತಾರೆ.

ಇನ್ಸ್ ಸ್ಟಾಗ್ರಾಮ್ ನಲ್ಲಿ ಹರಿದಾಡುತ್ತಿರುವ ವೀಡಿಯೋದಲ್ಲಿ ಹೇಳಿರುವ ಅಂಶಗಳು ಸತ್ಯಕ್ಕೆ ದೂರವಾಗಿದ್ದು, ಬಿಬಿಎಂಪಿ ವ್ಯಾಪ್ತಿಯಲ್ಲಿ 1ನೇ ಏಪ್ರಿಲ್ 2024ರಿಂದ ಯಾವುದೇ ಆಸ್ತಿ ತೆರಿಗೆ ಯನ್ನು ಹೆಚ್ಚಳ ಮಾಡುವುದಿಲ್ಲ. ಆಸ್ತಿ ತೆರಿಗೆಯನ್ನು 2016ರಲ್ಲಿ ಪರಿಷ್ಕರಿಸಲಾಗಿದ್ದು, ಆ ದರದಂತೆಯೇ ಪ್ರಸ್ತುತ ಆಸ್ತಿ ತೆರಿಗೆ ದರಗಳು ಚಾಲ್ತಿಯಲ್ಲಿರುತ್ತದೆ ಹಾಗೂ ಮುಂದುವರಿಯಲಿವೆ.

ಸದರಿ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದ್ದು, ಸುಳ್ಳು ಸಿದ್ದಿ ಹರಿಬಿಡುವವರ ಮೇಲೆ ನಿಯಮಾನುಸಾರ ಕಾನೂನು ಕ್ರಮ ವಹಿಸಲು ಬೆಂಗಳೂರು ನಗರ ಪೋಲಿಸ್ ಆಯುಕ್ತರು ರವರಿಗೆ ಪತ್ರ ಬರೆಯಲಾಗಿದೆ. ನಾಗರೀಕರು ಇಂತಹ ಯಾವುದೇ ಸುಳ್ಳು ಸುದ್ದಿಗಳಿಗೆ ಕಿವಿಗೊಡದಿರಲು ಕೋರಿದೆ.

ಸಹಿ/-

ಮುಖ್ಯ ಆಯುಕ್ತರು,

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.